# All India Radio: Bangalore
# National Bulletin In Kannada
# 22.04.2026 19.35 p.m.
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ವಿಕಸಿತ ಭಾರತ ನಿರ್ಮಿಸಲು ಪೂರ್ಣ ಮನಸ್ಸಿನಿಂದ ಕೊಡುಗೆ ನೀಡುವಂತೆ ಯುವಜನರಿಗೆ ಉಪರಾಷ್ಟ್ರಪತಿ ಕರೆ.

೨. ತಮಿಳುನಾಡಿನ ೨೩೪ ಹಾಗೂ ಪಶ್ಚಿಮ ಬಂಗಾಳದ ಮೊದಲ ಹಂತದಲ್ಲಿ ೨೯೪ ವಿಧಾನಸಭಾ ಕ್ಷೇತ್ರಗಳಿಗೆ ನಾಳೆ ಮತದಾನ

೩. ದೇಶದಲ್ಲಿ ತೈಲ ಮತ್ತು ಅನಿಲದ ನಿರಂತರ ಪೂರೈಕೆ ಸಹಜ: ಕೇಂದ್ರ ಸರ್ಕಾರ

೪. ಐಪಿಎಲ್ ಟಿ-೨೦ ಕ್ರಿಕೆಟ್: ರಾಜಸ್ಥಾನ ರಾಯಲ್ಸ್ ವಿರುದ್ಧ ಟಾಸ್ ಗೆದ್ದು ಫೀಲ್ಡಿಂಗ್ ಆಯ್ದುಕೊಂಡ ಲಕ್ನೋ ಸೂಪರ್ ಜೈಂಟ್ಸ್

****************

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದು ಕಲಬುರಗಿಯಲ್ಲಿ ನಡೆದ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ೧೦ನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ, ಮಾತನಾಡಿದರು.

ಪದವೀಧರರನ್ನು ಉದ್ದೇಶಿಸಿ ಮಾತನಾಡಿದ ಉಪರಾಷ್ಟ್ರಪತಿಗಳು, ದೊಡ್ಡ ಕನಸು ಕಾಣಲು, ಜವಾಬ್ದಾರಿಯುತವಾಗಿ ವರ್ತಿಸಲು ಮತ್ತು ವಿಕಸಿತ ಭಾರತ ಮತ್ತು ಆತ್ಮನಿರ್ಭರ ಭಾರತವನ್ನು ನಿರ್ಮಿಸಲು ಪೂರ್ಣ ಹೃದಯದಿಂದ ಕೊಡುಗೆ ನೀಡುವಂತೆ ಯುವಜನತೆಯನ್ನು ಪ್ರೋತ್ಸಾಹಿಸಿದರು.

ಧ್ವನಿ: ಉಪರಾಷ್ಟ್ರಪತಿ

ಕಾರ್ಯಕ್ರಮದಲ್ಲಿ ಕರ್ನಾಟಕದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಸತ್ಯ ನಾರಾಯಣ ಮತ್ತು ಇತರ ಗಣ್ಯರು ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಅವರು ಬೀದರ್‌ನ ಭಾಲ್ಕಿಯಲ್ಲಿ, ಡಾ. ಬಸವಲಿಂಗ ಪಟ್ಟದ್ದೇವರು ಮಹಾಸ್ವಾಮೀಜಿಯವರ ಅಮೃತ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

****************

ತಮಿಳುನಾಡು ರಾಜ್ಯ ವಿಧಾನಸಭಾ ಚುನಾವಣೆ ಹಾಗೂ ಪಶ್ಚಿಮ ಬಂಗಾಳ ವಿಧಾನಸಭೆಗೆ ನಾಳೆ ಮತದಾನ ನಡೆಯಲಿದ್ದು, ಚುನಾವಣಾ ಆಯೋಗ ಬಿಗಿ ಭದ್ರತೆ ಕೈಗೊಂಡಿದೆ.

ತಮಿಳುನಾಡಿನ ೨೩೪ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆಯಲಿದ್ದು, ಒಟ್ಟಾರೆ ೫ ಕೋಟಿ ೭೩ ಲಕ್ಷ ೪೩ ಸಾವಿರ ಮತದಾರರು ತಮ್ಮ ಸಾಂವಿಧಾನಿಕ ಹಕ್ಕು ಚಲಾಯಿಸಲಿದ್ದಾರೆ.

ಪಶ್ಚಿಮ ಬಂಗಾಳದ ೨೯೪ ವಿಧಾಸಭಾ ಕ್ಷೇತ್ರಗಳ ಪೈಕಿ ಮೊದಲ ಹಂತದಲ್ಲಿ ನಾಳೆ ೧೬ ಜಿಲ್ಲೆಗಳ ೧೫೨ ಕ್ಷೇತ್ರಗಳಿಗೆ ಮತದಾನ ನಡೆಯಲಿದ್ದು, ಇನ್ನುಳಿದ ಕ್ಷೇತ್ರಗಳಿಗೆ ಇದೇ ೨೯ರಂದು ಎರಡನೇ ಹಂತದ ಮತದಾನ ನಡೆಯಲಿದೆ.

ನಾಳಿನ ಮತದಾನಕ್ಕೆ ಚುನಾವಣಾ ಆಯೋಗ ಸಕಲ ಸಿದ್ಧತೆ ಮಾಡಿಕೊಂಡಿದೆ.

ಮೇ ೪ರಂದು ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಕಟವಾಗಲಿದೆ.

****************

ದೇಶದಲ್ಲಿ ತೈಲ ಮತ್ತು ಅನಿಲದ ನಿರಂತರ ಪೂರೈಕೆ ಸಹಜವಾಗಿದೆ ಎಂದು ಕೇಂದ್ರ ಸರ್ಕಾರ ಇಂದು ತಿಳಿಸಿದೆ.

ಪಶ್ಚಿಮ ಏಷ್ಯಾ ಸಂಘರ್ಷದ ಕುರಿತು ನವದೆಹಲಿಯಲ್ಲಿ ನಡೆದ ಅಂತರ ಸಚಿವಾಲಯದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ದೇಶದಲ್ಲಿ ಎಲ್‌ಪಿಜಿ, ಪಿಎನ್‌ಜಿ, ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆ ಸಹಜ ಸ್ಥಿತಿಗೆ ತರಲು ಸರ್ಕಾರ ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಹೇಳಿದರು.

ದೇಶೀಯ ಎಲ್‌ಪಿಜಿ ಪೂರೈಕೆ ಸಾಮಾನ್ಯವಾಗಿದ್ದು, ನಿನ್ನೆ ೪೫ ಲಕ್ಷಕ್ಕೂ ಹೆಚ್ಚು ಬುಕಿಂಗ್‌ಗಳು ನೋಂದಾಯಿಸಲ್ಪಟ್ಟಿವೆ ಮತ್ತು ಸುಮಾರು ೫೧ ಲಕ್ಷ ದೇಶೀಯ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸಲಾಗಿದೆ. ನಿನ್ನೆ ಎಂಟು ಸಾವಿರ ಟನ್‌ಗಳಿಗೂ ಹೆಚ್ಚು ವಾಣಿಜ್ಯ ಎಲ್‌ಪಿಜಿ ಮಾರಾಟವಾಗಿದೆ ಎಂದು ಅವರು ಮಾಹಿತಿ ನೀಡಿದರು.

ಪೆಟ್ರೋಲಿಯಂ ಮತ್ತು ಸ್ಫೋಟಕ ಸುರಕ್ಷತಾ ಸಂಸ್ಥೆಯ ಅಡಿಯಲ್ಲಿ, ಇಂಧನ ಮತ್ತು ಅನಿಲದ ನಿರಂತರ ಪೂರೈಕೆಯನ್ನು ಸಹಜಸ್ಥಿತಿಗೆ ತರಲು ಇಲಾಖೆಯು ಆದೇಶಗಳನ್ನು ನೀಡಿದೆ ಎಂದು ಡಿಪಿಐಐಟಿಯ ಕೈಗಾರಿಕೆ ಮತ್ತು ಆಂತರಿಕ ವ್ಯಾಪಾರ ಉತ್ತೇಜನ ಇಲಾಖೆಯ ಜಂಟಿ ಕಾರ್ಯದರ್ಶಿ ನಿಧಿ ಕೇಸರ್ವಾನಿ ಹೇಳಿದರು.

ಸಂಕುಚಿತ ಮತ್ತು ನೈಸರ್ಗಿಕ ಅನಿಲ ಹಾಗೂ ಜೈವಿಕ ಅನಿಲದ ಅಡಿಯಲ್ಲಿ, ವಿತರಣಾ ಕೇಂದ್ರಗಳಿಗೆ ಪರವಾನಗಿ ನೀಡುವ ಪ್ರಕ್ರಿಯೆಯನ್ನು ತ್ವರಿತಗೊಳಿಸಲಾಗಿದೆ. ೪೬೭ ಅರ್ಜಿಗಳಲ್ಲಿ, ವಿತರಣಾ ಕೇಂದ್ರಗಳಿಗೆ ಸಂಬಂಧಿಸಿದ ೧೫೭ ಪ್ರಕರಣಗಳಲ್ಲಿ ಅಂತಿಮ ಪರವಾನಗಿಗಳನ್ನು ನೀಡಲಾಗಿದೆ. ಹೆಚ್ಚುವರಿಯಾಗಿ, ೪೧ ಬಯೋಗ್ಯಾಸ್ ಸಿಲಿಂಡರ್ ಭರ್ತಿ ಮತ್ತು ಶೇಖರಣಾ ಘಟಕಗಳಿಗೆ ಅನುಮೋದನೆ ನೀಡಲಾಗಿದೆ ಎಂದು ಅವರು ಹೇಳಿದರು.

****************

ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವ ಗುರಿಯೊಂದಿಗೆ ತಮ್ಮ ಪ್ರತಿಯೊಂದು ಪ್ರಯತ್ನವನ್ನೂ ಜೋಡಿಸುವಂತೆ ನಾಗರಿಕ ಸೇವಕರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ.

ದೇಶದ ನಾಗರಿಕ ಸೇವಕರಿಗೆ ಪತ್ರ ಬರೆದಿರುವ ಅವರು, ನಿರಂತರ ಕಲಿಕೆ ಮತ್ತು ಸಾಮರ್ಥ್ಯ ವೃದ್ಧಿಗೆ ನಾಗರಿಕ ಸೇವಕರ ಬದ್ಧತೆಯನ್ನು ಮೆಚ್ಚಿದ್ದಾರೆ. ಇತ್ತೀಚೆಗೆ ಮುಕ್ತಾಯಗೊಂಡ ಕರ್ಮಯೋಗಿ ಸಾಧನಾ ಸಪ್ತಾಹದಲ್ಲಿ ಉತ್ಸಾಹದಿಂದ ಭಾಗವಹಿಸಿದ್ದಕ್ಕಾಗಿ ನಾಗರಿಕ ಸೇವಕರನ್ನು ಅಭಿನಂದಿಸಿದ ಅವರು, ಈ ವಾರದ ಕಲಿಕೆಯ ಉತ್ಸವವು ದೇಶಾದ್ಯಂತ ನಾಗರಿಕ ಸೇವಕರನ್ನು ಒಟ್ಟುಗೂಡಿಸಿದೆ ಎಂದು ಹೇಳಿದರು.

****************

ಉತ್ತರಾಖಂಡದ ಕೇದಾರನಾಥ ಧಾಮದ ದ್ವಾರಗಳನ್ನು ಇಂದು ಬೆಳಿಗ್ಗೆ ೮ ಗಂಟೆಗೆ ವೇದ ಮಂತ್ರಗಳು ಮತ್ತು ಸಾಂಪ್ರದಾಯಿಕ ಆಚರಣೆಗಳೊಂದಿಗೆ ಭಕ್ತರಿಗಾಗಿ ತೆರೆಯಲಾಯಿತು. ಹೆಲಿಕಾಪ್ಟರ್‌ನಿಂದ ದೇವಾಲಯದ ಮೇಲೆ ಹೂವುಗಳನ್ನು ಸುರಿಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಕೂಡ ಹಾಜರಿದ್ದರು. ಚಾರ್ ಧಾಮ್ ಯಾತ್ರೆಯನ್ನು ಸುರಕ್ಷಿತ, ಸುಸಂಘಟಿತ ಮತ್ತು ಅನುಕೂಲಕರವಾಗಿಸಲು ರಾಜ್ಯ ಸರ್ಕಾರ ವ್ಯಾಪಕ ವ್ಯವಸ್ಥೆಗಳನ್ನು ಮಾಡಿದೆ ಎಂದು ಅವರು ಹೇಳಿದರು.

ತೀರ್ಥಯಾತ್ರೆಯ ಸಮಯದಲ್ಲಿ ಎಲ್ಲಾ ಭಕ್ತರು ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕೆಂದು ಮುಖ್ಯಮಂತ್ರಿ ಒತ್ತಾಯಿಸಿದರು.

****************

ಅಮೆರಿಕ-ಇಸ್ರೇಲ್ ಹಾಗೂ ಇರಾನ್ ನಡುವಿನ ಕದನ ವಿರಾಮದ ಅವಧಿಯನ್ನು ಮತ್ತೆ ಅನಿರ್ದಿಷ್ಟಾವಧಿಗೆ ವಿಸ್ತರಿಸುವುದಾಗಿ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಹೇಳಿದ್ದಾರೆ.

ಎರಡೂ ದೇಶಗಳು ಶಾಂತಿ ಮಾತುಕತೆಗಳನ್ನು ಮುಂದುವರೆಸಲು ಅನುವು ಮಾಡಿಕೊಡುವ ಉದ್ದೇಶದಿಂದ, ಕದನ ವಿರಾಮವನ್ನು ವಿಸ್ತರಿಸುವುದಾಗಿ ತಿಳಿಸಿದ್ದಾರೆ.

ಆದರೆ, ಇರಾನ್‌ನ ಬಂದರುಗಳು ಹಾಗೂ ಕರಾವಳಿಯ ಮೇಲೆ ಅಮೆರಿಕ ನೌಕಾಪಡೆಯ ದಿಗ್ಬಂಧನವನ್ನು ಮಾತ್ರ ಮುಂದುವರೆಸುವುದಾಗಿಯೂ ಟ್ರಂಪ್ ತಿಳಿಸಿದ್ದಾರೆ.

ಇದರ ನಡುವೆ, ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಇಂದು ತನ್ನ ನೌಕಾ ಪಡೆಗಳು ಹಾರ್ಮುಜ್ ಜಲಸಂಧಿಯಲ್ಲಿ ಎರಡು ಹಡಗುಗಳನ್ನು ವಶಪಡಿಸಿಕೊಂಡಿದೆ ಎಂದು ಹೇಳಿಕೊಂಡಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಾತ್ಕಾಲಿಕ ಕದನ ವಿರಾಮವನ್ನು ಅನಿರ್ದಿಷ್ಟವಾಗಿ ವಿಸ್ತರಿಸುವುದಾಗಿ ಘೋಷಿಸಿದ ಕೆಲವೇ ಗಂಟೆಗಳ ನಂತರ ಈ ಬೆಳವಣಿಗೆಯಾಗಿದೆ ಬಂದಿದೆ.

****************

ಲಕ್ನೋದ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ  ಲಕ್ನೋ ಸೂಪರ್ ಜೈಂಟ್ಸ್ ಇಂದು ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಲಕ್ನೋ ಸೂಪರ್ ಜೈಂಟ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

****************

ಇಂದು ವಿಶ್ವ ಭೂಮಿ ದಿನ. ಪರಿಸರ ಸಂರಕ್ಷಣೆ ಮತ್ತು  ಭೂಮಿಯ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ.  ಹವಾಮಾನ ಬದಲಾವಣೆ, ಮಾಲಿನ್ಯ ಮತ್ತು ಅರಣ್ಯ ನಾಶ ತಡೆದು, ಪ್ಲಾಸ್ಟಿಕ್  ಬಳಕೆ ಕಡಿಮೆ ಮಾಡಿ, ಗಿಡ ನೆಡುವ ಮೂಲಕ ಭೂಮಿಯನ್ನು ರಕ್ಷಿಸಲು ಈ ದಿನ ಪಣತೊಡಲಾಗುತ್ತದೆ.

ಭೂಮಿ ತಾಯಿಯನ್ನು ರಕ್ಷಿಸುವುದು, ಪರಿಸರ ಸಮತೋಲನ  ಕಾಯ್ದುಕೊಳ್ಳುವುದು, ಮುಂದಿನ ಪೀಳಿಗೆಗಾಗಿ ಸುಸ್ಥಿರ ಜೀವನವನ್ನು ಉತ್ತೇಜಿಸುವುದು, ವಿಶ್ವ ಭೂಮಿ ದಿನಾಚರಣೆಯ  ಉದ್ದೇಶವಾಗಿದೆ.

ನಮ್ಮೆಲ್ಲರ ಕಲ್ಯಾಣ ಭೂಮಿಯ ಸಂರಕ್ಷಣೆಯಲ್ಲಿದೆ. ಭೂಮಿಯನ್ನು ರಕ್ಷಿಸುವುದು ಸಾಮೂಹಿಕ ಕರ್ತವ್ಯ ಮಾತ್ರವಲ್ಲ, ಇದು ಭವಿಷ್ಯದ ಪೀಳಿಗೆಗಾಗಿ ಕೈಗೊಳ್ಳಬೇಕಾದ ಪ್ರತಿಜ್ಞೆಯಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಅವರು ನಾಗರಿಕರು ಪರಿಸರ ಸ್ನೇಹಿ ಕ್ರಮಗಳನ್ನು ಅಳವಡಿಸಿಕೊಳ್ಳುವಂತೆ ಪ್ರೋತ್ಸಾಹಿಸಿದ್ದಾರೆ, ವೈಯಕ್ತಿಕ ಆಯ್ಕೆಗಳು ಗ್ರಹದ ಭವಿಷ್ಯವನ್ನು ರೂಪಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತವೆ ಎಂದು ಒತ್ತಿ ಹೇಳಿದ್ದಾರೆ.

****************

ಜೋಹಾನ್ಸ್‌ಬರ್ಗ್‌ನಲ್ಲಿಂದು ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್‌ನ ಐದು ಪಂದ್ಯಗಳ ಸರಣಿಯ ಮೂರನೇ ಪಂದ್ಯ ನಡೆಯಲಿದೆ.

ಭಾರತೀಯ ಕಾಲಮಾನ ರಾತ್ರಿ ೯.೩೦ಕ್ಕೆ ಪಂದ್ಯ ಆರಂಭವಾಗಲಿದೆ.

ಹರ್ಮನ್‌ಪ್ರೀತ್ ಕೌರ್ ನಾಯಕತ್ವದ ಭಾರತ ವನಿತೆಯರ ತಂಡ, ಸರಣಿಯ ಆರಂಭದ ಎರಡೂ ಪಂದ್ಯಗಳಲ್ಲಿ ಪರಾಭವಗೊಂಡಿದ್ದು, ಸರಣಿ ಜೀವಂತವಾಗಿರಿಸಲು, ಮೂರನೇ ಪಂದ್ಯದಲ್ಲಿ ಗೆಲ್ಲಲೇಬೇಕಾದ ಒತ್ತಡದಲ್ಲಿದೆ.

ದಕ್ಷಿಣ ಆಫ್ರಿಕಾ ಮಹಿಳಾ ತಂಡ ಮೊದಲ ಎರಡು ಪಂದ್ಯಗಳಲ್ಲಿ ಜಯ ಸಾಧಿಸಿ ಸರಣಿಯಲ್ಲಿ ಮುನ್ನಡೆ ಸಾಧಿಸಿದೆ.

ನಾಲ್ಕನೇ ಪಂದ್ಯ ಶನಿವಾರ ನಡೆಯಲಿದ್ದು, ಅಂತಿಮ ಪಂದ್ಯ ಇದೇ ೨೭ ರಂದು ಬೆನೋನಿಯ ವಿಲ್ಲೋಮೂರ್ ಪಾರ್ಕ್‌ನಲ್ಲಿ ನಡೆಯಲಿದೆ.

****************

ಪಹಲ್ಗಾಮ್ ಭಯೋತ್ಪಾದಕ ದಾಳಿ ನಡೆದು ಇಂದಿಗೆ ಒಂದು ವರ್ಷ ಪೂರ್ಣಗೊಂಡಿದೆ. ಈ ದಿನದಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಬಲಿಯಾದವರನ್ನು ಸ್ಮರಿಸಿ, ಗೌರವ ನಮನ ಸಲ್ಲಿಸಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಬಲಿಯಾದವರನ್ನು ಶಾಶ್ವತವಾಗಿ ಸ್ಮರಿಸಲಾಗುವುದು. ಎಲ್ಲೆಡೆ ಭಯೋತ್ಪಾದನೆಯನ್ನು ಅದರ ಎಲ್ಲಾ ರೂಪಗಳಲ್ಲಿ ನಿರ್ಮೂಲನೆ ಮಾಡುವ ಮೂಲಕ, ದೇಶವು ದೃಢನಿಶ್ಚಯದಿಂದ ನಿಂತಿದೆ. ಆ ಘೋರ ಕೃತ್ಯದಲ್ಲಿ ಅಮರರಾದ ಜೀವಗಳ ದುರಂತ ನಷ್ಟವು ನಮ್ಮ ಸಾಮೂಹಿಕ ಸ್ಮರಣೆಯಲ್ಲಿ ಅಚ್ಚಳಿಯದೆ ಉಳಿದಿದೆ ಎಂದು ಈ ಎಲ್ಲಾ ನಾಯಕರು ಸ್ಮರಿಸಿದರು.

ಇದೇ ಸಂದರ್ಭದಲ್ಲಿ, ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಯುರೋಪಿಯನ್ ಒಕ್ಕೂಟವು ಭಾರತದೊಂದಿಗೆ ತನ್ನ ಒಗ್ಗಟ್ಟನ್ನು ವ್ಯಕ್ತಪಡಿಸಿದೆ. ಕಳೆದ ವರ್ಷ ಏಪ್ರಿಲ್ ೨೨ ರಂದು ನಡೆದ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ೨೬ ಯೋಧರನ್ನು ಸ್ಮರಿಸುವಲ್ಲಿ ಭಾರತದ ಜನರೊಂದಿಗೆ ತಾನು ನಿಲ್ಲುವುದಾಗಿ ಒಕ್ಕೂಟವು ತನ್ನ ಹೇಳಿಕೆಯಲ್ಲಿ ತಿಳಿಸಿದೆ.

ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಯೂರೋಪಿಯನ್ ಒಕ್ಕೂವು ಬಲವಾಗಿ ಖಂಡಿಸಿದೆ.

*******ಮುಕ್ತಾಯ********